5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ದ.ಕ., ಮಂಗಳೂರು,
ಕಾರ್ಯನಿರ್ವಹಣೆ, ಪುತ್ತೂರು, ದ.ಕ.

## ಸೆಷನ್ಸ್ ಕೇಸ್ ನಂಬ್ರ **5017/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಪರಮೇಶ್ವರ ಜಿ. | ಪ್ರಾಸಾಃ 10 |
| ತಂದೆಯ ಹೆಸರು | : | ವೆಂಕಪ್ಪ ಗೌಡ | ಚಾಸಾಃ 13 |
| ಪ್ರಾಯ | : | 38 ವರ್ಷ | ದಿನಾಂಕಃ **22.08.2024** ರಂದು ಸಾಕ್ಷಿದಾರರಿಗೆ ಪ್ರಮಾಣವಚನ ಬೋಧಿಸಲಾಯಿತು. |
| ಉದ್ಯೋಗ | : | ಪಿಗ್ಮಿ ಕಲೆಕ್ಟರ್ | |
| ವಾಸಸ್ಥಳ | : | ಗುರಿಯಡ್ಕ ಮನೆ, ಈಶ್ವರಮಂಗಲ ಅಂಚೆ, ಬಡಗನ್ನೂರು ಗ್ರಾಮ, ಪುತ್ತೂರು ತಾಲೂಕು. | |

ಮುಖ್ಯ ವಿಚಾರಣೆಃ ಮಾನ್ಯ ಸರಕಾರಿ ಅಭಿಯೋಜಕರಿಂದಃ

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಸಾಕ್ಷಿಯು ಸದರಿ ದಾಖಲೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯ ಆರೋಪಿತರು ಒಳಸಂಚು ನಡೆಸಿದ ಸ್ಥಳದ ಮಹಜರು ಆಗಿದ್ದು, ಅದನ್ನು ಈಗಾಗಲೇ ನಿಶಾನೆ ಪಿ-16 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-16(ಸಿ) ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಏನು ಬರೆದಿರುತ್ತಾರೆ ಎಂಬುದರ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಅದನ್ನು ಓದಿ ನೋಡಿರುವುದಿಲ್ಲ ಮತ್ತು ಅದೇ ರೀತಿ ಪೊಲೀಸರಿಗೆ ನನಗೆ ಅದನ್ನು ಓದಿ ತಿಳಿಸಿರುವುದಿಲ್ಲ. ನಾನು ಸುಮಾರು 5 - 6 ವರ್ಷಗಳ ಪೂರ್ವದಲ್ಲಿ ಸ್ವಂತ ಕೆಲಸದ ಮೇಲೆ ಪುತ್ತೂರು ಗ್ರಾಮಾಂತರ ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರ ಕೋರಿಕೆಯ ಮೇರೆಗೆ ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆ.

(ಈ ಹಂತದಲ್ಲಿ ಸರಕಾರಿ ಅಭಿಯೋಜಕರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಕಡತವನ್ನು ಪರಿಶೀಲಿಸಿ, ಸರಕಾರಿ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು

ಅನುಮತಿಯನ್ನು ನೀಡಲಾಯಿತು.)

<u>ಪಾಟೀ ಸವಾಲುಃ ಮಾನ್ಯ ಸರಕಾರಿ ಅಭಿಯೋಜಕರಿಂದಃ</u>

2. ದಿನಾಂಕ 17.11.2015 ರಂದು ಪಡವನ್ನೂರು ಗ್ರಾಮದ ಮೂಡಾಯಾರು ಮನೆಯ ಹೊರಭಾಗದಲ್ಲಿ 1ನೇ ಆರೋಪಿಯು ತನ್ನ ಸಹಚರರೊಂದಿಗೆ ಪ್ರಾಸಾ.2 ರವರನ್ನು ಕೊಲೆ ಮಾಡಬೇಕೆಂಬ ಉದ್ದೇಶದಿಂದ ಒಳಸಂಚು ರೂಪಿಸಿದ ಸ್ಥಳ ಇದೇ ಎಂಬುದಾಗಿ ಪ್ರಾಸಾ.3 ರವರು ಸ್ಥಳವನ್ನು ತೋರಿಸಿಕೊಟ್ಟ ಮೇರೆಗೆ ನನ್ನ ಹಾಗೂ ಪ್ರಾಸಾ.9 ರವರ ಸಮಕ್ಷಮದಲ್ಲಿ ಪೊಲೀಸರು ನಿಶಾನೆ ಪಿ-16 ರಂತೆ ಮಹಜರನ್ನು ಸಂಜೆ 4.00 ಗಂಟೆಯಿಂದ 4.45 ಗಂಟೆಯ ವರೆಗೆ ತಯಾರಿಸಿ, ಅದರ ವಿವರಗಳನ್ನು ಓದಿ ಹೇಳಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ನಿಪಿ-16ನ್ನು ಓದಿ ನೋಡಿ ಅದನ್ನು ತಯಾರಿಸಿದ ಸ್ಥಳದಲ್ಲೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

3. ಪ್ರಸ್ತುತ ಪ್ರಾಸಾ.2 ರವರು ಮೃತಪಟ್ಟಿದ್ದಾರೆ. ಪ್ರಾಸಾ.2 ರವರು ಮೃತಪಟ್ಟಿದ್ದರಿಂದ ಮತ್ತು ಆರೋಪಿತರು ನನ್ನ ಪರಿಚಯಸ್ಥರಾಗಿರುವುದರಿಂದ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ **1** ಮತ್ತು **2**ನೇ ಆರೋಪಿತರ ಪರ ಶ್ರೀ ಎಂ**.**ವಿ**.**ಜಿ**.** ವಕೀಲರಿಂದಃ</u>

(ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.)

(ಸಾಕ್ಷಿದಾರರ ಹೇಳಿಕೆಯಂತೆ ನನ್ನ ಉಕ್ತಲೇಖನ ರೀತ್ಯಾ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದ.ಕ., ಮಂಗಳೂರು, ಕಾರ್ಯನಿರ್ವಹಣೆಃ ಪುತ್ತೂರು.